ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ     ದಿನಾಂಕ : DATE : 1/4/21

## ಪಕ್ಷಾಂತರಕ್ಕೆ ₹ 10 ಕೋಟಿ ಆಮಿಷದ ಆರೋಪ

# ಬಿಎಸ್‌ವೈ ವಿರುದ್ಧ ತನಿಖೆಗೆ ಅಸ್ತು

ಪ್ರಜಾವಾಣಿ ವಾರ್ತೆ 1/4/21



ಬೆಂಗಳೂರು: ಗುರುಮಠಕಲ್ ಕ್ಷೇತ್ರದ ಜೆಡಿಎಸ್ ಶಾಸಕ ನಾಗನಗೌಡ ಕಂದಕೂರ ಅವರನ್ನು ಬಿಜೆಪಿಗೆ ಸೆಳೆಯಲು 2019ರಲ್ಲಿ ₹ 10 ಕೋಟಿ ಲಂಚದ ಆಮಿಷ ಒಡ್ಡಿದ್ದ ಆರೋಪಕ್ಕೆ ಸಂಬಂಧಿಸಿದಂತೆ ದೇವದುರ್ಗ ಪೊಲೀಸ್ ಠಾಣೆಯಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮತ್ತು ಇತರರ ವಿರುದ್ಧ ದಾಖಲಾಗಿರುವ ಪ್ರಕರಣದ ತನಿಖೆಗೆ ಇದ್ದ ತಡೆಯಾಜ್ಞೆಯನ್ನು ಹೈಕೋರ್ಟ್ ಬುಧವಾರ ತೆರವುಗೊಳಿಸಿದೆ.

ಇದರಿಂದಾಗಿ ಈ ಪ್ರಕರಣದ ತನಿಖೆಗೆ ಮತ್ತೆ ಅವಕಾಶ ದೊರಕಿದಂತಾಗಿದೆ.

'2019ರ ಫೆಬ್ರುವರಿ 7ರ ಮಧ್ಯರಾತ್ರಿ ತನ್ನನ್ನು ದೇವದುರ್ಗ ಪ್ರವಾಸಿ ಮಂದಿರಕ್ಕೆ ಕರೆಸಿಕೊಂಡ ಯಡಿಯೂರಪ್ಪ ಅವರು, ತಂದೆಯಿಂದ ರಾಜೀನಾಮೆ ಕೊಡಿಸಿ ಮುಂಬೈಗೆ ಕಳುಹಿಸುವಂತೆ ಒತ್ತಡ ಹೇರಿದ್ದರು. ಇದಕ್ಕಾಗಿ ₹ 10 ಕೋಟಿ ನೀಡುವ ಆಮಿಷ ಒಡ್ಡಿದ್ದರು. ಮುಂದಿನ ಚುನಾವಣೆಯಲ್ಲಿ ನನ್ನನ್ನು ಗುರುಮಠಕಲ್ ಕ್ಷೇತ್ರದಲ್ಲಿ ಕಣಕ್ಕಿಳಿಸಿ ಗೆಲ್ಲಿಸುವ ಮತ್ತು ಸಚಿವ ಸ್ಥಾನ ನೀಡುವುದಾಗಿಯೂ ಹೇಳಿದ್ದರು' ಎಂದು ನಾಗನಗೌಡ ಅವರ ಮಗ ಶರಣಗೌಡ ದೇವದುರ್ಗ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ದೇವದುರ್ಗ ಪ್ರವಾಸಿ ಮಂದಿರದಲ್ಲಿ ನಡೆದಿತ್ತು ಎನ್ನಲಾದ ಮಾತುಕತೆಯ ರೆಕಾರ್ಡಿಂಗ್ ಅನ್ನೂ ಶರಣಗೌಡ ಪೊಲೀಸರಿಗೆ ನೀಡಿದ್ದರು. ಯಡಿಯೂರಪ್ಪ, ಶಾಸಕರಾದ ಶಿವನಗೌಡ ನಾಯಕ್, ಜೆ. ಪ್ರೀತಂ ಗೌಡ ಮತ್ತು ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾದ ಬಳಿಕ ಅವರ ರಾಜಕೀಯ ಸಲಹೆಗಾರರಾಗಿದ್ದ ಪತ್ರಕರ್ತ ಎಂ.ಬಿ. ಮರಂಕಲ್ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿದ್ದರು.

ಈ ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ಪಡೆದಿದ್ದ ಯಡಿಯೂರಪ್ಪ ಮತ್ತು ಇತರ ಆರೋಪಿಗಳು, ಎಫ್‌ಐಆರ್ ರದ್ದು ಮಾಡುವಂತೆ ಕೋರಿ ಹೈಕೋರ್ಟ್‌ನ ಕಲಬುರ್ಗಿ ಪೀಠದಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದರು. 2019ರ ಫೆಬ್ರುವರಿಯಲ್ಲೇ ರಿಟ್ ಅರ್ಜಿಯ ವಿಚಾರಣೆ ನಡೆಸಿದ್ದ ನ್ಯಾಯಾಲಯ, ತನಿಖೆಗೆ ತಡೆ ನೀಡಿತ್ತು.

5ನೇ ಪುಟ ನೋಡಿ

### 'ಲಿಸ್ಟಿಂಗ್' ವಿಳಂಬದಲ್ಲಿ ಕೈವಾಡದ ಶಂಕೆ

ತನಿಖೆಗೆ ತಡೆ ನೀಡಿದ್ದ 2019ರ ಫೆಬ್ರುವರಿ 22ರ ಆದೇಶ ಪ್ರಶ್ನಿಸಿ 2019ರ ಏಪ್ರಿಲ್ 12 ಮತ್ತು 15ರಂದು ಎರಡು ಮಧ್ಯಂತರ ಅರ್ಜಿಗಳನ್ನು ಸಲ್ಲಿಸಲಾಗಿತ್ತು. 2020ರ ಫೆಬ್ರುವರಿ 8ರವರೆಗೂ ವಕೀಲರ ಕೋರಿಕೆಯಂತೆ ವಿಚಾರಣೆ ಮುಂದೂಡುತ್ತಾ ಬರಲಾಯಿತು. ಆ ಬಳಿಕ 2021ರ ಮಾರ್ಚ್ 15ರವರೆಗೂ ಅರ್ಜಿಗಳನ್ನು ವಿಚಾರಣೆಗೆ ಪಟ್ಟಿ ಮಾಡದೇ ಇರುವ ಕುರಿತು ನ್ಯಾಯಮೂರ್ತಿ ಜಾನ್ ಮೈಕಲ್ ಕುನ್ಹ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

'ಸುಪ್ರೀಂಕೋರ್ಟ್ ಆದೇಶದಂತೆ ವಿಶೇಷ ಪೀಠ ಅಸ್ತಿತ್ವಕ್ಕೆ ಬಂದ ಬಳಿಕ ಸಂಸದರು ಹಾಗೂ ಶಾಸಕರಿಗೆ ಸಂಬಂಧಿಸಿದಂತೆ ಬಾಕಿ ಇರುವ ಪ್ರಕರಣಗಳ ಪಟ್ಟಿ ಸಲ್ಲಿಸಲು ಸೂಚಿಸಲಾಗಿತ್ತು. ಆ ಪಟ್ಟಿಯಿಂದಲೂ ಈ ಎರಡು ಅರ್ಜಿಗಳನ್ನು ಹೊರಗಿಡಲಾಗಿತ್ತು. ಉದ್ದೇಶಪೂರ್ವಕವಾಗಿ ಈ ರೀತಿ ಮಾಡಿರುವುದು ಕಂಡುಬರುತ್ತಿದೆ. ಈ ರೀತಿಯ ತಪ್ಪು ಮಾಡಿರುವ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವುದಕ್ಕಾಗಿ ರಿಜಿಸ್ಟ್ರಿಯು ಪ್ರಕರಣವನ್ನು ಮುಖ್ಯ ನ್ಯಾಯಮೂರ್ತಿಯವರ ಗಮನಕ್ಕೆ ತರಬೇಕು' ಎಂದು ಆದೇಶದಲ್ಲಿ ನಿರ್ದೇಶನ ನೀಡಿದ್ದಾರೆ.

# ಬಿಎಸ್‌ವೈ ವಿರುದ್ಧ ತನಿಖೆಗೆ ಅಸ್ತು

ಒಂದನೇ ಪುಟದಿಂದ... 1/4/21

ಕಲಬುರ್ಗಿ ಪೀಠದ ಆದೇಶ ಪ್ರಶ್ನಿಸಿ ಶರಣಗೌಡ ಮಧ್ಯಂತರ ಅರ್ಜಿ ಸಲ್ಲಿಸಿದ್ದರು. ಬಳಿಕ ಈ ಅರ್ಜಿ ಚುನಾಯಿತ ಪ್ರತಿನಿಧಿಗಳಿಗೆ ಸಂಬಂಧಿಸಿದ ಪ್ರಕರಣಗಳ ವಿಚಾರಣೆಗಾಗಿ ಹೈಕೋರ್ಟ್‌ನಲ್ಲಿ ಅಸ್ತಿತ್ವಕ್ಕೆ ತಂದಿರುವ ವಿಶೇಷ ಪೀಠಕ್ಕೆ ವರ್ಗವಾಗಿತ್ತು.

ಆರು ಬಾರಿ ನಡೆದ ವಿಚಾರಣೆಯಲ್ಲಿ ಅರ್ಜಿದಾರರ ಪರವಾಗಿ ವಕೀಲ ಪ್ರೊ.ರವಿವರ್ಮ ಕುಮಾರ್ ವಾದ ಮಂಡಿಸಿದ್ದರು. ಬುಧವಾರ ಅರ್ಜಿಯ ವಿಚಾರಣೆ ಪೂರ್ಣಗೊಳಿಸಿದ ವಿಶೇಷ ಪೀಠದ ನ್ಯಾಯಮೂರ್ತಿ ಜಾನ್ ಮೈಕಲ್ ಡಿಕುನ್ಹ, ಯಡಿಯೂರಪ್ಪ ಮತ್ತು ಇತರ ಆರೋಪಿಗಳ ವಿರುದ್ಧದ ತನಿಖೆಗೆ ನೀಡಿದ್ದ ತಡೆಯಾಜ್ಞೆ ತೆರವುಗೊಳಿಸಿದರು.

'ಈ ಪ್ರಕರಣವು ಸಂಜ್ಞೇಯ ಅಪರಾಧ ಕೃತ್ಯವನ್ನು ಒಳಗೊಂಡಿರುವುದು ಮೇಲ್ನೋಟಕ್ಕೆ ಕಾಣಿಸುತ್ತಿದೆ. ಇಂತಹ ಸಂದರ್ಭದಲ್ಲಿ ತನಿಖೆಗೆ ತಡೆ ನೀಡಲಾಗದು' ಎಂದು ನ್ಯಾಯಾಲಯ ಹೇಳಿದೆ.